Akashvani : Bangalore
Regional Bulletin In Kannada
04.02.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

***************

ಮುಖ್ಯಾಂಶಗಳು

1. ವಿಧಾನಸಭೆಯಲ್ಲಿಂದು ವಿಕಸಿತ ಭಾರತ ಜಿ–ರಾಮ್–ಜಿ ಕುರಿತಂತೆ ಚರ್ಚೆ – ಮುಖ್ಯಮಂತ್ರಿ ನಿರ್ಣಯ ವಿರೋಧಿಸಿದ ಬಿಜೆಪಿ
2. ಮೇಲ್ಮನೆಗೆ ಸದಸ್ಯ ಸಿ.ಟಿ.ರವಿ ಕರೆ ತರುವಂತೆ ವಿಪಕ್ಷ ಸದಸ್ಯ ರವಿಕುಮಾರ್‌ಗೆ ಸಭಾಪತಿ ಸೂಚನೆ
3. ರಾಜ್ಯದಲ್ಲಿ ಹೆಚ್ಚುತ್ತಿರುವ ಮಾನವ ವನ್ಯಜೀವಿ ಸಂಘರ್ಷ ತಡೆಯುವಂತೆ ಕೇಂದ್ರ ಪರಿಸರ ಸಚಿವರಿಗೆ, ಸಚಿವ ಕುಮಾರಸ್ವಾಮಿ ಮನವಿ
4. ಬೆಂಗಳೂರು–ಪುಣೆ ಮತ್ತೊಂದು ಹೈಸ್ಪೀಡ್ ರೈಲು ಕಾರಿಡಾರ್‌ಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸಕಾರಾತ್ಮಕ ಸ್ಪಂದನೆ
5. ಸಂಸತ್ತಿನಲ್ಲಿ ವಿರೋಧ ಪಕ್ಷದ ನಾಯಕನ ಧ್ವನಿ ಅಡಗಿಸುವ ಪ್ರಯತ್ನ ; ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ

***************

ವಿಧಾನಸಭೆಯಲ್ಲಿಂದು ವಿಕಸಿತ ಭಾರತ ಜಿ–ರಾಮ್–ಜಿ ಯೋಜನೆ ಕುರಿತಂತೆ ಸುದೀರ್ಘ ಚರ್ಚೆ ನಡೆಯಿತು.

ಚರ್ಚೆಯಲ್ಲಿ ಭಾಗವಹಿಸಿದ ಆಡಳಿತ ಪಕ್ಷದ ಹಿರಿಯ ಸದಸ್ಯ ಬಸವರಾಜ ರಾಯರೆಡ್ಡಿ, ಯೋಜನೆಯ ಹೆಸರು ಬದಲಾಯಿಸುವುದರಿಂದ ಅಭಿವೃದ್ಧಿ ಸಾಧ್ಯವಿಲ್ಲ ಎಂದು ತಿಳಿಸಿದರು.

ಭೋಜನ ವಿರಾಮದ ಬಳಿಕ ಕಲಾಪ ಆರಂಭವಾಗುತ್ತಿದ್ದಂತೆ ಆಡಳಿತ ಪಕ್ಷದ ಶಾಸಕ ಶಿವಲಿಂಗೇಗೌಡ, ಪ್ರತಿಪಕ್ಷ ಸದಸ್ಯರಿಗೆ ವ್ಯಕ್ತಿಗತ ನಿಂದನೆ ಮಾಡಿದ್ದಾರೆ. ಹಾಗೂ ಅವರು ನಿಂದನೆ ಮಾಡಿದ ಪದಗಳನ್ನು ಕಡತದಿಂದ ತೆಗೆದುಹಾಕಬೇಕು ಎಂದು ಪ್ರತಿಪಕ್ಷಗಳ ಸದಸ್ಯರು ಆಗ್ರಹಿಸಿದರು.

ಈ ವೇಳೆ ಆಡಳಿತ ಹಾಗೂ ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು. ಆಡಳಿತ ಪಕ್ಷದ ಶಿವಲಿಂಗೇಗೌಡ ಮಧ್ಯ ಪ್ರವೇಶಿಸಿ ಮಾತನಾಡಿ, ನನ್ನ ಬಗ್ಗೆಯೂ ಆಕ್ಷೇಪಾರ್ಹ ಪದ ಬಳಕೆ ಮಾಡಲಾಗಿದ್ದು, ಅದು ಸಾಬೀತಾದರೆ ಅವರ ಮನೆಯ ಜೀತ ಮಾಡುತ್ತೇನೆ ಎಂದು ಸವಾಲು ಹಾಕಿದರು.

ಈ ನಡುವೆ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಿಲ್ಲದ ಹಿನ್ನೆಲೆಯಲ್ಲಿ ಸಭಾಧ್ಯಕ್ಷ ಯು.ಟಿ.ಖಾದರ್ ಸದನವನ್ನು ಕೆಲಕಾಲ ಮುಂದೂಡಿದರು.

ಬಳಿಕ ಆರಂಭವಾದ ಕಲಾಪದಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ವಿಬಿ ಜಿ–ರಾಮ್–ಜಿ ನರೇಗಾದಲ್ಲಿರುವ ಕೊರತೆಯನ್ನು ಸರಿಪಡಿಸಲು ಜಾರಿಗೆ ತಂದ ಯೋಜನೆಯಾಗಿದೆ ಎಂದು ಸಮರ್ಥಿಸಿಕೊಂಡರು. ಮುಖ್ಯಮಂತ್ರಿ ಮಂಡಿಸಿದ ನಿರ್ಣಯವನ್ನು ವಿರೋಧಿಸುವುದಾಗಿ ತಿಳಿಸಿದರು.

ಆಡಳಿತ ಪಕ್ಷದ ಕೆ.ವೈ. ನಂಜೇಗೌಡ ಮಾತನಾಡಿ, ರಾಜ್ಯದಲ್ಲಿ 47 ಲಕ್ಷ ಕುಟುಂಬಗಳಿಗೆ ಮನ್ರೇಗಾ ಯೋಜನೆ ಉದ್ಯೋಗ ಕಲ್ಪಿಸಿತ್ತು ಎಂದು ಸದನದ ಗಮನ ಸೆಳೆದರು.

***************

ಮೇಲ್ಮನೆಯಲ್ಲಿಂದು ಭೋಜನ ವಿರಾಮದ ಬಳಿಕ ಕಲಾಪ ಆರಂಭವಾಗುತ್ತಿದ್ದಂತೆಯೇ ಆಡಳಿತ ಪಕ್ಷದ ಸದಸ್ಯರು ಸಿ.ಟಿ.ರವಿ ಅವರನ್ನು ಸದನದಿಂದ ಉಚ್ಚಾಟಿಸಬೇಕು ಎಂದು ಪಟ್ಟುಹಿಡಿದರು.

ಈ ನಡುವೆ ಬಿಜೆಪಿ ಸದಸ್ಯೆ ಭಾರತೀ ಶೆಟ್ಟಿ ಮಾತನಾಡಿ, ಸದಸ್ಯ ಬಿ.ಕೆ.ಹರಿಪ್ರಸಾದ್ ಅವರ ಮಾತಿನಿಂದ ತಮ್ಮ ಮನಸ್ಸಿಗೂ ನೋವಾಗಿದ್ದು, ಸಭಾತ್ಯಾಗ ಮಾಡುತ್ತೇನೆ ಎಂದು ಪ್ರಕಟಿಸಿ ಸದನದಿಂದ ಹೊರ ನಡೆದರು.

ಕಾನೂನು ಸಚಿವ ಎಚ್.ಕೆ.ಪಾಟೀಲ್, ವಿಷಯ ಪ್ರಸ್ತಾಪಿಸಿ ಸಿ.ಟಿ.ರವಿಯವರನ್ನು ಸದನಕ್ಕೆ ಹಾಜರಾಗಲು ನಿರ್ದೇಶನ ನೀಡುವಂತೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಭಾಪತಿ ಬಸವರಾಜ ಹೊರಟ್ಟಿ ಅವರು, ಸಿ.ಟಿ.ರವಿಯವರನ್ನು ಸದನಕ್ಕೆ ಕರೆತನ್ನಿ ಎಂದು ವಿಪಕ್ಷ ಸದಸ್ಯ ರವಿಕುಮಾರ್‌ಗೆ ಆದೇಶ ನೀಡಿದರು.

***************

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು, ನವದೆಹಲಿಯಲ್ಲಿಂದು ವಿವಿಧ ಸಹೋದ್ಯೋಗಿ ಸಚಿವರೊಂದಿಗೆ ಪ್ರತ್ಯೇಕ ಸಭೆ ನಡೆಸಿ, ಮಾತುಕತೆ ನಡೆಸಿದ್ದಾರೆ.

ಕೇಂದ್ರ ರೈಲ್ವೆ ಸಚಿವ ಅಶ್ವಿನಿವೈಷ್ಣವ್ ಅವರನ್ನು ಭೇಟಿಯಾಗಿ ರಾಜ್ಯಕ್ಕೆ ಸಂಬಂಧಿಸಿದ ಪ್ರಮುಖ ಅಭಿವೃದ್ಧಿ ವಿಷಯಗಳ ಕುರಿತು ವಿಸ್ತೃತ ಸಮಾಲೋಚನೆ ನಡೆಸಿದ್ದಾರೆ.

ಬೆಂಗಳೂರು–ಪುಣೆ ಹೈಸ್ಪೀಡ್ ರೈಲು ಕಾರಿಡಾರ್, ಪ್ರಸ್ತಾವಿತ ಬೆಂಗಳೂರು–ಮುಂಬೈ ಹೊಸ ಸಂಪರ್ಕ ಮತ್ತು ರೈಲು ಮಾರ್ಗಗಳಲ್ಲಿ ವನ್ಯಜೀವಿಗಳ ಅಪಘಾತಗಳನ್ನು ತಡೆಯಲು ರೈಲ್ವೆ ಬೇಲಿ ಮತ್ತು ಬ್ಲಾಕ್ ಕಾರಿಡಾರ್‌ಗಳ ಅನುಷ್ಠಾನದ ಕುರಿತು ಚರ್ಚೆ ನಡೆಸಿದ್ದಾರೆ.

ಇದಕ್ಕೂ ಮೊದಲು ಅವರು, ರಾಜ್ಯದಲ್ಲಿ ಹೆಚ್ಚುತ್ತಿರುವ ಮಾನವ ವನ್ಯಜೀವಿ ಸಂಘರ್ಷ ಹಾಗೂ ವಿಶೇಷವಾಗಿ ಆನೆಗಳ ದಾಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ರಾಜ್ಯದ ಹಲವು ಜಿಲ್ಲೆಗಳಲ್ಲಿ ರೈತರ ಮೇಲೆ ವನ್ಯಜೀವಿಗಳಿಂದ ಆಗುತ್ತಿರುವ ಹಾನಿ ಮತ್ತು ಪ್ರಾಣಾಪಯದ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆದರು. ಈ ವೇಳೆ ತ್ವರಿತವಾಗಿ ಕ್ರಮಕೈಗೊಳ್ಳುವಂತೆ ಸಚಿವ ಭೂಪೇಂದ್ರ ಯಾದವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ಬೆಂಗಳೂರು–ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ಪ್ರಸ್ತಾವನೆಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಅಶ್ವಿನಿ ವೈಷ್ಣವ್ ಅವರನ್ನು ಭೇಟಿಯಾಗಿ, ಬೆಂಗಳೂರು ಮತ್ತು ಪುಣೆ ನಡುವಿನ ಹೈಸ್ಪೀಡ್ ರೈಲು ಕಾರಿಡಾರ್ ನಿರ್ಮಾಣವಾದಲ್ಲಿ ರಾಜ್ಯದ ಬಹುತೇಕ ಪ್ರದೇಶದ ಒಟ್ಟಾರೆ ಅಭಿವೃದ್ಧಿ ಸಾಧ್ಯವಾಗಲಿದೆ ಎಂದು ರೈಲ್ವೆ ಸಚಿವರಿಗೆ ಮನವರಿಕೆ ಮಾಡಿದ್ದಾರೆ.

ಈ ಕಾರಿಡಾರ್ ನಿರ್ಮಾಣದಿಂದ ರಾಜ್ಯದ ಬೆಳಗಾವಿ, ಹುಬ್ಬಳ್ಳಿ, ಹಾವೇರಿ, ದಾವಣಗೆರೆ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಅಲ್ಲದೇ ಪುಣೆಯಿಂದ ರಾಜ್ಯದ ಆರೇಳು ಜಿಲ್ಲೆಗಳಿಗೆ ತ್ವರಿತ ಪ್ರಯಾಣ ಸಂಪರ್ಕ ಸಾಧ್ಯವಾಗಲಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಲ್ಹಾದ್ ಜೋಶಿ ಮಾಹಿತಿ ಹಂಚಿಕೊಂಡಿದ್ದಾರೆ.

***************

ಸಂಸತ್ತಿನಲ್ಲಿ ವಿರೋಧ ಪಕ್ಷದ ನಾಯಕನ ಧ್ವನಿ ಅಡಗಿಸುವ ಪ್ರಯತ್ನ ನಿರಂತರವಾಗಿ ನಡೆಯುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಪ್ರಜಾಪ್ರಭುತ್ವದ ಆಶಯಕ್ಕೆ ವಿರುದ್ಧವಾಗಿರುವ ಆಡಳಿತ ಪಕ್ಷದ ಈ ನಡೆಯನ್ನು ತೀವ್ರವಾಗಿ ಖಂಡಿಸುವುದಾಗಿ ಹೇಳಿದ್ದಾರೆ.

ಜನರ ಪರವಾಗಿ ಪ್ರಶ್ನೆಗಳನ್ನು ಕೇಳುವುದು ಜವಾಬ್ದಾರಿಯುತ ವಿರೋಧಪಕ್ಷದ ನಾಯಕನಾಗಿ ರಾಹುಲ್ ಗಾಂಧಿಯವರ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ.

***************

ಬೆಂಗಳೂರಿನ ಗೀತಂ ವಿಶ್ವವಿದ್ಯಾನಿಲಯದಲ್ಲಿ ಇಂದು ರಾಜ್ಯದ ಮುಂದಿನ ಪೀಳಿಗೆಯ ಜೆನ್‌ಝಿ ಅಂಚೆ ಕಚೇರಿಯನ್ನು ಅನಾವರಣಗೊಳಿಸಲಾಯಿತು. ಕರ್ನಾಟಕ ಅಂಚೆ ವೃತ್ತದ ಅಂಚೆ ಸೇವೆಗಳ ನಿರ್ದೇಶಕ ಸಂದೇಶ್ ಮಹದೇವಪ್ಪ ಅಂಚೆ ಕಚೇರಿಯನ್ನು ಲೋಕಾರ್ಪಣೆಗೊಳಿಸಿದರು.

ಈ ಅಂಚೆ ಕಚೇರಿಯೂ ಆರಾಮದಾಯಕ ಹೊರಾಂಗಣ ಮತ್ತು ಒಳಾಂಗಣ ಆಸನಗಳು, ಉಚಿತ ವೈಫೈ ಚಾರ್ಜಿಂಗ್ ಸ್ಟೇಷನ್‌ಗಳು, ಕೆಫೆಟೇರಿಯಾವನ್ನು ಒಳಗೊಂಡಿದೆ. ಇದು ಉತ್ಪಾದಕತೆ ಮತ್ತು ಸಾಮಾಜಿಕ ಸಂವಹನವನ್ನು ಉತ್ತೇಜಿಸಲಿದೆ. ವಿದ್ಯಾರ್ಥಿಗಳಿಂದ ವಿದ್ಯಾರ್ಥಿಗಳಿಗಾಗಿ, ವಿದ್ಯಾರ್ಥಿಗಳಿಗಾಗಿ ಎಂಬ ಧ್ಯೇಯವಾಕ್ಯವನ್ನು ಸಾಕಾರಗೊಳಿಸುವ ಪರಿಕಲ್ಪನೆ ಹೊಂದಿದೆ.

ಮುಂದಿನ ಪೀಳಿಗೆಯ ಅಂಚೆಕಚೇರಿಗಳನ್ನು ದೇಶದಾದ್ಯಂತ ಶಿಕ್ಷಣ ಸಂಸ್ಥೆಗಳಿಗೆ ವಿಸ್ತರಿಸಲು ಇಂಡಿಯಾ ಪೋಸ್ಟ್ ಯೋಜಿಸಿದೆ.

***************

ಭಾರತೀಯ ಅಂಚೆ ಇಲಾಖೆಯು ಸ್ಪೀಡ್ ಪೋಸ್ಟ್, ಇತರೆ ಪತ್ರ ಹಾಗೂ ಪಾರ್ಸೆಲ್‌ಗಳ ಬುಕ್ಕಿಂಗ್ ಸೇವಾ ಅವಧಿಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲಾ ಅಂಚೆ ಕಚೇರಿಗಳಲ್ಲಿ ವಿಸ್ತರಿಸಿದೆ ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕ ಆರ್.ಅಶೋಕ್ ತಿಳಿಸಿದ್ದಾರೆ.

ಸೋಮವಾರದಿಂದ ಶುಕ್ರವಾರದವರೆಗೆ ಕೆಲಸದ ದಿನಗಳಿಗೆ ಮಾತ್ರ ಈ ಬುಕ್ಕಿಂಗ್ ಸಮಯದ ವಿಸ್ತರಣೆ ಅನ್ವಯವಾಗುತ್ತದೆ ಎಂದು ಹೇಳಿದ್ದಾರೆ.

***************

ಬರವಣಿಗೆ ಎನ್ನುವುದು ನಮ್ಮ ಸುಪ್ತಮನಸ್ಸಿನಿಂದ ಬರುವಂತದ್ದು. ಅದಕ್ಕೆ ಯಾವುದೇ ತರಬೇತಿ, ಕಾರ್ಯಾಗಾರ ಇರುವುದಿಲ್ಲ ಎಂದು ಖ್ಯಾತ ಚಿತ್ರ ಸಾಹಿತಿ ಜಯಂತ್ ಕಾಯ್ಕಿಣಿ ಅಭಿಪ್ರಾಯಪಟ್ಟಿದ್ದಾರೆ.

17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಡೆದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗೀತರಚನೆಯನ್ನು ಕಲಿಸುವುದಕ್ಕಾಗುವುದಿಲ್ಲ ಎಂದು ಹೇಳಿದ್ದಾರೆ.

ಸಮಯ ಬದಲಾಗುತ್ತಿರುತ್ತದೆ, ತಂತ್ರಜ್ಞಾನ ಬೆಳೆಯುತ್ತಿದೆ, ನಾವು ಸಹ ಕಾಲಕ್ಕೆ ತಕ್ಕಂತೆ ಬದಲಾಗಬೇಕಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ವ್ಯಕ್ತ, ಶ್ರಾವ್ಯ, ದೃಶ್ಯ ಹೀಗೆ ಮೂರೂ ಗುಣಗಳಿರುವ ಒಂದು ಅಪರೂಪದ ಮಾಧ್ಯಮ ಸಿನಿಮಾ ಎಂದ ಅವರು, ಒಬ್ಬ ನಿರ್ದೇಶಕನಿಗೆ ಇದರ ಅರಿವು ಮತ್ತು ಹಿಡಿತವಿದ್ದರೆ, ತೆರೆಯ ಮೇಲೆ ಅದ್ಭುತವಾದುದನ್ನು ಸೃಷ್ಟಿಸಬಹುದು ಎಂದು ತಿಳಿಸಿದ್ದಾರೆ.

***************

ಧಾರವಾಡ ಜಿಲ್ಲೆಯಲ್ಲಿ 3 ಲಕ್ಷ 96 ಸಾವಿರದ 119 ಗೃಹಲಕ್ಷ್ಮಿ ಫಲಾನುಭವಿಗಳಿದ್ದು, ಮೃತ ಮತ್ತು ಸ್ಥಳಾಂತರವಾದ ಫಲಾನುಭವಿಗಳ ಕುರಿತು ಪ್ರತಿ ತಿಂಗಳು ನಿರಂತರ ಪರಿಷ್ಕರಣೆ ಮಾಡಬೇಕು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶ್ಯಾನಪ್ಪಗೌಡ ಆರ್.ಪಾಟೀಲ್ ಸೂಚನೆ ನೀಡಿದ್ದಾರೆ.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅರ್ಹರಿಗೆ ಗೃಹಲಕ್ಷ್ಮಿ ಯೋಜನೆ ತಲುಪಿಸುವಲ್ಲಿ ಅಧಿಕಾರಿಗಳು ಶ್ರಮಿಸಬೇಕೆಂದು ತಿಳಿಸಿದ್ದಾರೆ.

***************

ಪ್ರತಿಯೊಬ್ಬರು ವೃತ್ತಿಪರ ಕೆಲಸ ಕಾರ್ಯಗಳ ಜೊತೆಗೆ ವೈಯಕ್ತಿಕ ಆರೋಗ್ಯದ ಬಗ್ಗೆಯೂ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಕೆನರಾ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಸಹಾಯಕ ಮಹಾಪ್ರಬಂಧಕ ಎಂ.ಅಶೋಕ್ ಕುಮಾರ್ ತಿಳಿಸಿದ್ದಾರೆ.

ಕೋಲಾರದಲ್ಲಿ ಬ್ಯಾಂಕ್ ಸಿಬ್ಬಂದಿಗೆ ಆಯೋಜಿಸಿದ್ದ ಉಚಿತ ನೇತ್ರ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಬ್ಯಾಂಕ್ ಸಿಬ್ಬಂದಿ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

***************

ಜಮೀನು ಸರ್ವೆ ಕಾರ್ಯ ಮಾಡಿಕೊಡಲು ಹಣದ ಬೇಡಿಕೆ ಇಟ್ಟು ರೈತನಿಂದ 3 ಸಾವಿರ ರೂಪಾಯಿ ಲಂಚದ ಹಣ ಸ್ವೀಕರಿಸುತ್ತಿದ್ದ ಸರ್ವೆಯರ್, ಲೋಕಾಯುಕ್ತ ಪೋಲಿಸರಿಗೆ ಸಿಕ್ಕಿಬಿದ್ದ ಪ್ರಕರಣ ಸಾಬೀತಾಗಿದೆ.